# 2 ನೇ ಹೆಚ್ಚುವರಿ ಪ್ರಥಮ ದರ್ಜೆಯ  ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ನಂಜನಗೂಡು

**ಸಿ.ಸಿ. ನಂ.1244-2019** **ಪಿ .ಡಬ್ಲುಃ 1**

| ಸಾಕ್ಷಿದಾರರ ಹೆಸರು<br>ವಾಸ್ತವ್ಯ | ಎನ್ ಕಮಲಮ್ಮ<br>ಬಜಾರ್ ರಸ್ತೆ, ನಂಜನಗೂಡು ತಾ. |
|---|---|
| | **ಸತ್ಯ ಪ್ರತಿಜ್ಞೆಯ ಮೇರೆಗೆ  ದಿನಾಂಕ 09-06-2025.** |

**ಮುಂದುವರೆದ ಮುಖ್ಯ ವಿಚಾರಣೆಃ ಪಿರ್ಯಾದಿ ಪರ  ಶ್ರೀ ಕೆ.ಎಸ್.ಎನ್ ವಕೀಲರಿಂದಃ**

ಆರೋಪಿ ನನಗೆ ನೀಡಿದ ಚೆಕ್ ನಂ.002330 ನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಅದರ ಮೇಲಿರುವ ಆರೋಪಿಯ ಸಹಿಯನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಅದನ್ನು ನಿಪಿ-1(ಎ) ಎಂದು, ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ದಿ.30-05-2019 ರಂದು ನನ್ನ ವಕೀಲರ ಮೂಲಕ  ಆರೋಪಿಯ ಎರಡೂ ವಿಳಾಸಗಳಿಗೂ ಕಳುಹಿಸಿದ ನೋಟಿಸ್‌ನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-4 ಮತ್ತು 5 ಎಂದು, ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-6 ಎಂದು,  ತೆರೆಯದೇ ಇರುವ ಅಂಚೆ ಲಕೋಟೆಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು,

ಅದನ್ನು ತೆರೆದು ನೋಡಲಾಗಿ ಅದರಲ್ಲಿನ ತಿಳುವಳಿಕೆಯನ್ನು ನಿಪಿ–7(ಎ) ಎಂದು ಗುರುತಿಸಲಾಯಿತು. ಆದುದರಿಂದ ನಾನು ಪಿರ್ಯಾದಿನಲ್ಲಿ ಕೋರಿರುವಂತೆ ಆರೋಪಿ ವಿರುದ್ಧ ಸೂಕ್ತ ಆದೇಶ ಮಾಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

(ಪಾಟೀ ಸವಾಲಿಗೆ ಆರೋಪಿ ಪರ ವಕೀಲರು ಸಮಯವಕಾಶ ಕೋರಿದ್ದು, ಸಮಯವಕಾಶ ನೀಡಲಾಯಿತು)

**(ತೆರೆದ ನ್ಯಾಯಾಲಯದಲ್ಲಿ ನನ್ನ ಹೇಳಿಕೆಯಂತೆ ಗಣಕೀಕೃತ ಮಾಡಿಸಲಾಯಿತು)**

**ಓ . ಹೇ. ಕೇ. ಸರಿ. ಇದೆ**

**ಸಹಿ/–**

**2 ನೇ ಕಿ.ಪ್ರ.ದ. ನ್ಯಾ ದಂ. ನಂಜನಗೂಡು**